**<u>ದಿನಾಂಕ 27.08.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>**
**<u>ಪಾಟೀ ಸವಾಲುಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ .</u>**

ಪ್ರಸ್ತುತ ಪ್ರಕರಣದಲ್ಲಿ ಸಾಕ್ಷ್ಯ ನುಡಿಯಲು ಕಂಪನಿಯಿಂದ ಅಧಿಕಾರ ಪತ್ರ ನೀಡಲಾಗಿದೆಯಾ ಎಂದರೆ ನಾನೇ ವ್ಯವಸ್ಥಾಪಕಳಾಗಿರುವುದರಿಂದ ಅವಶ್ಯಕತೆ ಇಲ್ಲ ಎಂದು ನುಡಿಯುತ್ತಾರೆ. ಪ್ರಸ್ತುತ ಪ್ರಕರಣದ ಬಗ್ಗೆ ನನಗೆ ವಯಕ್ತಿಕ ಮಾಹಿತಿ ಇರುವುದಿಲ್ಲ. ದಾಖಲಾತಿಗಳ ಪ್ರಕಾರ ಅಪಘಾತ ದಿನಾಂಕ 10.09.2022 ರಂದು ಸಂಭವಿಸಿದ್ದು, ದಿನಾಂಕ 19.09.2022 ರಂದು ಗಾಯಾಳು ಮೃಪತಟ್ಟಿರುತ್ತಾರೆ ಎಂದರೆ ಸರಿ. ಗಾಯಾಳು ಚಿಕಿತ್ಸೆ ಪಡೆಯುತ್ತಿದ್ದ ಕಾರಣ ದೂರು ದಾಖಲಿಸಲು ವಿಳಂಬ ಆಗಿದ್ದು, ಆ ಬಗ್ಗೆ ದೂರಿನಲ್ಲೂ ಸಹ ತಿಳಿಸಲಾಗಿದೆ ಎಂದರೆ ಸರಿಯಲ್ಲ. ನಿ.ಆರ್ 1 ಅನ್ನು ದಿನಾಂಕ 19.09.2022 ರಂದು ದಾಖಲಿಸಲಾಗಿದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಸದರಿ ದಾಖಲಾತಿ 2 ನೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಬಗ್ಗೆ ಆಗಿರುತ್ತದೆ ಎಂದು ನುಡಿಯುತ್ತಾರೆ. ನಿ.ಆರ್ 1 ರಲ್ಲಿ ಅಪಘಾತದ ದಿನಾಂಕ ದಿಃ 10.09.2022 ಎಂದು ನಮೂದು ಇದೆ ಎಂದರೆ ಸರಿ. ಸುಳ್ಳು ದೂರನ್ನು ನೀಡಲಾಗಿದೆ ಎಂದು ಸುಳ್ಳು ಆಪಾದನೆ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ಆಪಾದಿತ ವಾಹನಕ್ಕೆ ನಮ್ಮ ಕಂಪನಿಯಿಂದ ವಿಮೆ ನೀಡಲಾಗಿದ್ದು, ಅಪಘಾತದ ಸಮಯದಲ್ಲಿ ವಿಮೆ ಚಾಲ್ತಿಯಲ್ಲಿತ್ತು ಎಂದರೆ ಸರಿ. ಸಾಕ್ಷಿಯು ಮುಂದುವರೆದು ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಂತೆ ವಿಮೆ ನೀಡಲಾಗಿತ್ತು ಎಂದು ನುಡಿಯುತ್ತಾರೆ. ಗಾಯಾಳು ಚಿಕಿತ್ಸೆ ಪಡೆದ ಬಗ್ಗೆ ದಾಖಲಾತಿ ನೀಡಿಲ್ಲ ಎಂದು ಸುಳ್ಳು ಪ್ರತಿಪಾದನೆ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ನಿ.ಆರ್ 1 ರಲ್ಲಿ ಮೃತ ವ್ಯಕ್ತಿಯು ಚಾಲನೆ ಮಾಡುತ್ತಿದ್ದು, ಬಿದ್ದು ಗಾಯಗೊಂಡಿರುವುದಾಗಿ ತಿಳಿಸಲಾಗಿದೆ ಎಂದು ಸುಳ್ಳು ಪ್ರತಿಪಾದನೆ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ನಿ.ಆರ್ 1 ರಲ್ಲಿ ಮೃತ ವ್ಯಕ್ತಿ ವಾಹನ ಚಾಲನೆ ಮಾಡುತ್ತಿದ್ದ ಬಗ್ಗೆ ನಮೂದು ಮಾಡಿಲ್ಲ ಎಂದರೆ ಸರಿಯಲ್ಲ. ಮೃತ ವ್ಯಕ್ತಿ ಹಿಂಬದಿ ಸವಾರನಾಗಿರುವುದಾಗಿ ಪೊಲೀಸ್

ದಾಖಲಾತಿಗಳಲ್ಲಿ ನಮೂದು ಆಗಿದೆ ಎಂದರೆ ಸಾಕ್ಷಿಯು ಪರಿಹಾರ ಪಡೆಯುವ ಉದ್ದೇಶದಿಂದ ದಾಖಲಾತಿಗಳನ್ನು ಸೃಷ್ಟಿಸಲಾಗಿದೆ ಎಂದು ನುಡಿಯುತ್ತಾರೆ. ವೆಂಕಟೇಶ್ ಎಂಬುವವರ ವಿರುದ್ದ ಪ್ರಕರಣ ದಾಖಲಾಗಿದೆ ಎಂದರೆ ಸರಿ. ಅಂತಿಮ ವರದಿಯನ್ನು ಪ್ರಶ್ನಿಸಿದ್ದೀರಾ ಎಂದರೆ ಸಾಕ್ಷಿಯು ನಾವು ಪಕ್ಷಗಾರರಲ್ಲದ ಕಾರಣ ಪ್ರಶ್ನಿಸಿಲ್ಲ ಎಂದು ನುಡಿಯುತ್ತಾರೆ. ಪರಿಹಾರ ಪಾವತಿಸುವ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳುವ ಉದ್ದೇಶದಿಂದ ಸುಳ್ಳು ಪ್ರತಿಪಾದನೆ ಮಾಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1** ನೇ ಎಸ್‌ಸಿಜೆ ಮತ್ತು ಎಸಿಜೆಎಮ್

ಬೆಂಗಳೂರು